**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 880/2023**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ನಂದಿನಿ | ಸಿ.ಡಬ್ಲ್ಯೂ-01 |
| ಗಂಡನ ಹೆಸರು | : | ಮಾರುತಿ | ಪಿ.ಡಬ್ಲ್ಯೂ-01 |
| ವಯಸ್ಸು | : | 28 ವರ್ಷ | |
| ಉದ್ಯೋಗ | : | ಗೃಹಿಣಿ | |
| ವಾಸಸ್ಥಳ | : | ಚಳ್ಳಕೆರೆ | ದಿಃ 27.05.2026 |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಆರೋಪಿತರು ನನ್ನ ಪರಿಚಯಸ್ಥರು .

ಆರೋಪಿತರು ಎಂದಿಗೂ ನನ್ನೊಂದಿಗೆ ಗಲಾಟೆ ಮಾಡಿರುವುದಿಲ್ಲ. ಆರೋಪಿತರು ಎಂದಿಗೂ ನನಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ, ಕೈಕಾಲುಗಳಿಂದ ಹಲ್ಲೆ ಮಾಡಿರುವುದಿಲ್ಲ. ಯಾವುದೇ ವಸ್ತುವಿನಿಂದ ಯಾವುದೇ ಹಲ್ಲೆ ಮಾಡಿರುವುದಿಲ್ಲ. ಹಲ್ಲೆ ಕುರಿತು ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಪಿರ್ಯಾದಿಯನ್ನು ನೀಡಿಲ್ಲ.

ಸಾಕ್ಷಿಗೆ ಪಿರ್ಯಾದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಪಿರ್ಯಾದಿಯನ್ನು ನಿಪಿಃ 1 ಅಂತ, ಸಾಕ್ಷಿಯ ಸಹಿಯನ್ನು ನಿಪಿಃ 1(ಎ) ಅಂತ ಗುರುತಿಸಲಾಯಿತು.

ನಿಪಿಃ 1 ರಲ್ಲಿ ಏನು ಬರೆದಿರುತ್ತದೆ ಅಂತ ನನಗೆ ಗೊತ್ತಿಲ್ಲ. ನಿಪಿಃ 1 ಕ್ಕೆ ನಾನು 2023 ರಲ್ಲಿ ನನ್ನ ಸಹಿ ಪಡೆದಿರುತ್ತಾರೆ.

ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿಃ2 ಅಂತ, ಸಾಕ್ಷಿಯ ಸಹಿಯನ್ನು ನಿಪಿಃ 2(ಎ) ಅಂತ ಗುರುತಿಸಲಾಯಿತು.

ಪೊಲೀಸರು ಘಟನಾ ಸ್ಥಳಕ್ಕೆ ಬಂದಿರುವುದಿಲ್ಲ. ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ನಿಪಿ.2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಯಾವುದೇ ವಸ್ತುವನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ. ನಿಪಿಃ 2 ನ್ನೂ ಸಹ ನಿಪಿಃ 1 ಕ್ಕೆ ಸಹಿಯನ್ನು ಪಡೆಯುವ ಕಾಲಕ್ಕೆ ಸಹಿಯನ್ನು ತೆಗೆದುಕೊಂಡಿರುತ್ತಾರೆ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ನಾನು ಆರೋಪಿತರ ಮನೆಯಲ್ಲಿ ಬಾಡಿಗೆಗೆ ಇದ್ದೆ ಎಂದರೆ ಸರಿ. ಆರೋಪಿತರು ಮನೆ ಖಾಲಿ ಮಾಡಲು ಹೇಳಿದ್ದು , ನಾನು ಬೇರೆ ಮನೆ ಸಿಕ್ಕ ನಂತರ ಖಾಲಿ ಮಾಡುವುದಾಗಿ ಹೇಳಿದ್ದೆ ಎಂದರೆ ಸರಿ. ದಿನಾಂಕ 29.07.2023 ರಂದು ಬೆಳಿಗ್ಗೆ 10-30 ರ ಸಮಯದಲ್ಲಿ ನಾನು, ಚಾಸಾ-2 ಮತ್ತು 3 ರವರು ನಾವು ಬಾಡಿಗೆಯಲ್ಲಿ ವಾಸ ಇದ್ದ ಮನೆಯಲಿಲ ನಿಂತುಕೊಂಡಿದ್ದಾಗ ಆರೋಪಿತರು ಬಂದು ನನಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ನಾನು ನೀಡಿದ್ದ ರೂ. 2 ಲಕ್ಷ ಹಣ ನೀಡಿ ಎಂದು ಕೇಳಿದ್ದಕ್ಕೆ ಯಾವುದೇ ಹಣವನ್ನು ನೀಡುವುದಿಲ್ಲ ಎಂದು 1 ನೇ ಆರೋಪಿಯು ಕೈ ಕಾಲುಗಳಿಂದ ನನ್ನ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಆರೋಪಿಯು ಇಟ್ಟಿಗೆ ತುಂಡಿನಿಂದ ನನ್ನ ತಲೆಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ನಾನು ಪೊಲೀಸರಿಗೆ ನಿಪಿಃ 1 ರಂತೆ ಪಿರ್ಯಾದಿ ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 30.07.2023 ರಂದು ಚಾಸಾ-4 ಮತ್ತು 5 ರವರ ಸಮಕ್ಷಮ ನಾನು ಸ್ಥಳ ತೋರಿಸಿದ ಮೇರೆಗೆ ಬೆಳಿಗ್ಗೆ 11.15 ರಿಂದ 12.00 ಗಂಟೆಯವರೆಗೆ ನಿಪಿ.2 ರಂತೆ ಮಹಜರ್ ಕ್ರಮ ಜರುಗಿಸಿ ಇಟ್ಟಿಗೆ ತುಂಡನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಪ್ರಕರಣದ ಕುರಿತು ಸಂಪೂರ್ಣ ಮಾಹಿತಿ ಇದ್ದರೂ ಕೂಡ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾವು ಹಾಗೂ ಆರೋಪಿತರು ರಾಜೀ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಅದೇ ಕಾರಣಕ್ಕೆ ಈಗ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಸ್ ಬಿ ಎನ್ ., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ